ಪ್ರಜಾವಾಣಿ

Thursday, January 14th, 2010

ನಗರದಲ್ಲಿ ಅಕ್ರಮ ಕಟ್ಟಡ ಸಕ್ರಮ

# ಲೋಕಾಯುಕ್ತ ಹೆಗ್ಡೆ ವಿರೋಧ

ಪ್ರಜಾವಾಣಿ ವಾರ್ತೆ

**ಬೆಂಗಳೂರು:** 'ನಗರ ಯೋಜನಾ ಕಾಯ್ದೆಯನ್ನು ಉಲ್ಲಂಘಿಸಿ ಅಕ್ರಮವಾಗಿ ನಿರ್ಮಾಣಗೊಂಡ ಕಟ್ಟಡಗಳನ್ನು ಸಕ್ರಮಗೊಳಿಸಬಾರದು. ಇದು ಕಾನೂನಿಗೆ ವಿರುದ್ಧ' ಎಂದು ಲೋಕಾಯುಕ್ತ ನ್ಯಾ. ಸಂತೋಷ್ ಹೆಗ್ಡೆ ಅಭಿಪ್ರಾಯಪಟ್ಟರು.

ಶ್ರೀ ಭಗವಾನ್ ಮಹಾವೀರ್ ಜೈನ್ ಕಾಲೇಜಿನ ಕನ್ನಡ ವೇದಿಕೆ ನಗರದಲ್ಲಿ ಬುಧವಾರ ಏರ್ಪಡಿಸಿದ್ದ 'ಜಾಗೃತಿ ಹಬ್ಬ'ದಲ್ಲಿ ಅವರು ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸುತ್ತ ಈ ವಿಷಯ ಪ್ರಸ್ತಾಪಿಸಿದರು.

'ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಅಕ್ರಮವಾಗಿ ತಲೆ ಎತ್ತಿರುವ ಕಟ್ಟಡಗಳನ್ನು ರಾಜ್ಯ ಸರ್ಕಾರ ಸಕ್ರಮಗೊಳಿಸಲು ಪ್ರಯತ್ನಿಸುತ್ತಿರುವುದು ಸಲ್ಲದು' ಎಂದು ಅವರು ಖಂಡಿಸಿದರು.

ನಿಮ್ಮ ಮುಂದಿನ ದಾಳಿ...? ವಿದ್ಯಾರ್ಥಿಗಳು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, 'ಖಚಿತ ಸಾಕ್ಷ್ಯಾಧಾರಗಳು ದೊರೆತಲ್ಲಿ ರಾಜಕಾರಣಿಗಳೇ ಆಗಲಿ ಸರ್ಕಾರಿ ಅಧಿಕಾರಿಗಳೇ ಆಗಲಿ ಅವರ ಮನೆಯ ಮೇಲೆ ದಾಳಿ ಮಾಡಲು ಮೀನ-ಮೇಷ ಎಣಿಸಬೇಕಿಲ್ಲ' ಎಂದರು.

'ರಾಜಕಾರಣಿಗಳು, ಅಧಿಕಾರಿಗಳು ಭ್ರಷ್ಟಾಚಾರ ವಿಷಯದಲ್ಲಿ ಮಾತ್ರ ತೀವ್ರ ಹೊಂದಾಣಿಕೆಯಿಂದ ವ್ಯವಹರಿಸುತ್ತಿದ್ದಾರೆ. ಆದ್ದರಿಂದಲೇ ರಾಜ್ಯದಲ್ಲಿ ಭ್ರಷ್ಟಾಚಾರ ವ್ಯಾಪಕವಾಗಿ ಬೇರೂರಿಬಿಟ್ಟಿದೆ' ಎಂದು ಅವರು ಬೇಸರ ವ್ಯಕ್ತಪಡಿಸಿದರು.

'ಯಾವುದೇ ಇಲಾಖೆಯ ಅಧಿಕಾರಿಗಳು ಭ್ರಷ್ಟಾಚಾರದಲ್ಲಿ ತೊಡಗಿಕೊಂಡಾಗ ಅವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಬೇಕಾಗುತ್ತದೆ. ಆದರೆ ಲೋಕೋಪಯೋಗಿ ಇಲಾಖೆಯಲ್ಲಿ ಮಾತ್ರ ಈ ವಿಷಯವಾಗಿ ಅನುಮತಿ ದೊರೆಯುತ್ತಿಲ್ಲ'

'ಅಮಾನತುಗೊಂಡ ಎಂಜಿನಿಯರುಗಳಿಗೆ ಬಡ್ತಿ ನೀಡುವುದು ಹಾಗೂ ಅಮಾನತು ರದ್ದುಗೊಳಿಸುತ್ತಿರುವ ಸರ್ಕಾರದ ಕ್ರಮ ಸೂಕ್ತವಲ್ಲ' ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.